# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ: | 1427 |
| ಮಾನ್ಯ ಸದಸ್ಯರ ಹೆಸರು: | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ: | 16.03.2026 |
| ಉತ್ತರಿಸಬೇಕಾದ ಸಚಿವರು: | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಬಸ್ ಹಾಗೂ ರೈಲು ನಿಲ್ದಾಣಗಳು, ಬೀದಿ ಬದಿ ಸೇರಿ ವಿವಿಧೆಡೆ ಅಲೆದಾಡುತ್ತಿರುವ ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಗುರುತಿಸಿ, ಅವರಿಗೆ ಚಿಕಿತ್ಸೆ ಸಹಿತ ಪುನರ್ವಸತಿ ಕಲ್ಪಿಸುವ ಯೋಜನೆಯ ಅನುಷ್ಠಾನದ ತುರ್ತು ಅಗತ್ಯತೆ ಮತ್ತು ಅನಿವಾರ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ<br><br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಜಿಲ್ಲಾ ಮಟ್ಟದ ಆಸ್ಪತ್ರೆಗಳಲ್ಲಿ ಸೂಕ್ತ ಎನ್‌ಜಿಒಗಳ ಸಹಯೋಗದೊಂದಿಗೆ ತುರ್ತು ಆರೈಕೆ ಮತ್ತು ಚೇತರಿಕೆ ಕೇಂದ್ರಗಳನ್ನು(ECRC) ಸ್ಥಾಪಿಸಲಾಗುತ್ತಿದೆ. |
| ಆ) | ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು; | ತುರ್ತು ಆರೈಕೆ ಮತ್ತು ಚೇತರಿಕೆ ಕೇಂದ್ರಗಳಲ್ಲಿ ಮಾನಸಿಕ ಅಸ್ವಸ್ಥತೆಯಿಂದ ಬಳಲುತ್ತಿರುವ ನಿರಾಶ್ರಿತ ವ್ಯಕ್ತಿಗಳಿಗೆ ಆರೈಕೆ ಮತ್ತು ಚಿಕಿತ್ಸೆಯನ್ನು ಒದಗಿಸಲಾಗುತ್ತಿದೆ. |
| ಇ) | ರಾಜ್ಯದ ಎಲ್ಲಾ ಜಿಲ್ಲಾಸ್ಪತ್ರೆಗಳು ಹಾಗೂ ಪ್ರಮುಖ ಆಸ್ಪತ್ರೆಗಳಲ್ಲಿ ಈ ಸಂಬಂಧಿತ ತುರ್ತು ಆರೈಕೆ ಮತ್ತು ಪುನರ್ವಸತಿ ಕೇಂದ್ರಗಳನ್ನು ಈಗಾಗಲೇ ಸ್ಥಾಪಿಸಲಾಗಿದೆಯೇ; | |
| ಈ) | ಬಸ್ ಹಾಗೂ ರೈಲು ನಿಲ್ದಾಣಗಳು, ಬೀದಿ ಬದಿ ಸೇರಿ ವಿವಿಧೆಡೆ ಅಲೆದಾಡುತ್ತಿರುವ ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಗುರುತಿಸಿ, ಅವರಿಗೆ ಚಿಕಿತ್ಸೆ ಸಹಿತ ಪುನರ್ವಸತಿ ಕಲ್ಪಿಸಲೇಬೇಕಾದ ಕೆಲಸ ಅತ್ಯಂತ ತುರ್ತಾಗಿ ಆಗಬೇಕಿದ್ದು ಆರೈಕೆ ಕೇಂದ್ರಗಳನ್ನು ಆರಂಭಿಸಲು ಸರ್ಕಾರ ಈ ಕೂಡಲೇ ಅಗತ್ಯ ಕ್ರಮ ಕೈಗೊಳ್ಳುವುದೇ; | ಪ್ರಸ್ತುತ, 6 ಜಿಲ್ಲೆಗಳಲ್ಲಿ ಬೆಂಗಳೂರು ಗ್ರಾಮಾಂತರ (ದೊಡ್ಡಬಳ್ಳಾಪುರ ಆಸ್ಪತ್ರೆ) , ಯಾದಗಿರಿ, ಉಡುಪಿ, ಗದಗ, ಬೆಂಗಳೂರು ನಗರ (ಸಿವಿ ರಾಮನ್ ಆಸ್ಪತ್ರೆ) ಮತ್ತು ದಾವಣಗೆರೆ ಇಲ್ಲಿ ತುರ್ತು ಆರೈಕೆ ಮತ್ತು ಚೇತರಿಕೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಇದುವರೆವಿಗೂ, ಸುಮಾರು 224 ನಿರಾಶ್ರಿತ ಮಾನಸಿಕ ಅಸ್ವಸ್ಥರಿಗೆ ಆರೈಕೆ ಒದಗಿಸಲಾಗಿದೆ. ಇನ್ನು 5 ಜಿಲ್ಲೆಗಳಲ್ಲಿ ಬೆಂಗಳೂರು ನಗರ (ಕೆ ಆರ್ ಪುರಂ ಆಸ್ಪತ್ರೆ), ಚಿತ್ರದುರ್ಗ, ಹಾವೇರಿ, ರಾಮನಗರ ಮತ್ತು ಮೈಸೂರು ಇಲ್ಲಿ ಶೀಘ್ರದಲ್ಲೇ ತುರ್ತು ಆರೈಕೆ ಮತ್ತು ಚೇತರಿಕೆ ಕೇಂದ್ರಗಳನ್ನು ಸ್ಥಾಪಿಸಲಾಗುವುದು |
| ಉ) | ಬಸ್ ಹಾಗೂ ರೈಲು ನಿಲ್ದಾಣಗಳು, ಬೀದಿ ಬದಿ ಸೇರಿ ವಿವಿಧೆಡೆ ಅಲೆದಾಡುತ್ತಿರುವ ನಿರ್ಗತಿಕ ಮಾನಸಿಕ ಅಸ್ವಸ್ಥರಿಗೆ ಪೂರ್ಣ ಪ್ರಮಾಣದಲ್ಲಿ ಚಿಕಿತ್ಸೆ ಸಹಿತ ಪುನರ್ವಸತಿ ಕಲ್ಪಿಸುವ ಯೋಜನೆಯನ್ನು ಕಡ್ಡಾಯವಾಗಿ ರಾಜ್ಯದ ಎಲ್ಲಾ ಜಿಲ್ಲಾಸ್ಪತ್ರೆಗಳು ಹಾಗೂ ಪ್ರಮುಖ ಆಸ್ಪತ್ರೆಗಳಲ್ಲಿ ಯಾವ ಕಾಲಮಿತಿಯೊಳಗೆ ಅನುಷ್ಠಾನಕ್ಕೆ ತರಲಾಗುವುದು? | |

ಆಕುಕ 40 ಎಸ್‌ಬಿವಿ 2026

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು